# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22 ನೇ ಸಾಲಿನ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಜೆ-117012/11/2020 ಎಫ್ ವೈ, ದಿನಾಂಕ: 27-08-2020.
2) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಜೆ-117012/11/2020 ಎಫ್ ವೈ, ದಿನಾಂಕ: 01-03-2021.
3) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಜೆ-117012/11/2020 ಎಫ್ ವೈ, ದಿನಾಂಕ: 26-03-2021.
4) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಜೆ-117012/11/2020 ಎಫ್ ವೈ, ದಿನಾಂಕ: 16-06-2021.
5) ಮೀನುಗಾರಿಕೆ ನಿರ್ದೇಶಕರ ಏಕ ಕಡತ ಸಂಖ್ಯೆ: DOF-ADMNOBGT/25/2021.

******

0 FEB 2022

## ಪ್ರಸ್ತಾವನೆ:

ಮೀನುಗಾರಿಕೆ ವಲಯದಲ್ಲಿ ಮಹತ್ತರ ಬೆಳವಣಿಗೆ ತರುವ ಸಲುವಾಗಿ ಕೇಂದ್ರ ಸರ್ಕಾರವು ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ ಎಂಬ ಮಹತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೆ ತಂದು ಮೀನುಗಾರಿಕೆ ವಲಯದ ಮತ್ತು ಮೀನುಗಾರರ ಸಾಮಾಜಿಕ ಮತ್ತು ಆರ್ಥಿಕ ಸರ್ವತೋಮುಖ ಅಭಿವೃದ್ಧಿಗಾಗಿ ಈ ಕೆಳಕಂಡ ವಿವಿಧ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಲು ನಿರ್ದೇಶಕರು ಪ್ರಸ್ತಾಪಿಸಿರುತ್ತಾರೆ:-

1. ಉತ್ಪಾದನೆ ಮತ್ತು ಉತ್ಪಾದಕತೆಯ ಹೆಚ್ಚಳ
2. ಮೂಲಭೂತ ಸೌಲಭ್ಯ ಮತ್ತು ಹಿಡುವಳಿ ನಂತರದ ಕಾರ್ಯಾಚರಣೆಗಳ ಅಭಿವೃದ್ಧಿ
3. ಮಾನಿಟರಿಂಗ್, ಕಂಟ್ರೋಲ್ ಮತ್ತು ಸರ್ವೀಲೆನ್ಸ್ ಮತ್ತು ಇತರೆ ಅಗತ್ಯ ಆಧಾರಿತ ಅಳವಡಿಕೆಗಳು
4. ಮೀನುಗಾರರ ಕಲ್ಯಾಣಕ್ಕಾಗಿ ರಾಷ್ಟ್ರೀಯ ಯೋಜನೆ

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಪತ್ರದಲ್ಲಿ, 2020-21 ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ಒಟ್ಟು ರೂ.4204.14 ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿ, ಕೇಂದ್ರದ ಪಾಲಿನ ಮೊದಲನೇ ಕಂತಿನ ಅನುದಾನ ರೂ.2102.00 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಪತ್ರದಲ್ಲಿ, ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ಒಟ್ಟು ರೂ.2704.00 ಲಕ್ಷಗಳಿಗೆ (ಕೇಂದ್ರದ ಪಾಲಿನ ಅನುದಾನ ರೂ.829.26 ಲಕ್ಷ) ಆಡಳಿತಾತ್ಮಕ ಮಂಜೂರಾತಿ ನೀಡಿ, ಕೇಂದ್ರದ ಪಾಲಿನ ಅನುದಾನದ ಮೊದಲನೇ ಕಂತಿನ ಅನುದಾನವಾಗಿ ರೂ.414.63 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಸರ್ಕಾರವು ದಿನಾಂಕ: 27-08-2020 ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಿರುವ ಘಟಕಗಳಿಗೆ ಎರಡನೇ ಕಂತಿನ ಅನುದಾನವಾಗಿ ಕೇಂದ್ರದ ಪಾಲಿನ ರೂ.514.89

Kamakshi U.A.

ಲಕ್ಷಗಳನ್ನು ಮತ್ತು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಪತ್ರದಲ್ಲಿ ರೂ.1587.11 ಲಕ್ಷಗಳನ್ನು ಹೀಗೆ ಒಟ್ಟು ರೂ.2102.00 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರದಲ್ಲಿ, 2021-22ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯ ಅನುಷ್ಠಾನಕ್ಕಾಗಿ ಆಯವ್ಯಯದಲ್ಲಿ ಒಟ್ಟಾರೆಯಾಗಿ ರೂ.3679.00 ಲಕ್ಷಗಳನ್ನು (ರೂ.3183.00 ಲಕ್ಷ + ರೂ.496.00 ಲಕ್ಷ) ಮೀಸಲಿಡಲಾಗಿತ್ತು. ಇದನ್ನು ಹೊರತುಪಡಿಸಿ ಪೂರಕ ಅಂದಾಜು-1 ರಲ್ಲಿ ರೂ.949.45 ಲಕ್ಷಗಳನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡಲಾಗಿರುತ್ತದೆ. ಇದುವರೆಗೂ ರೂ.4132.45 ಲಕ್ಷಗಳಲ್ಲಿ ರೂ.2944.59 ಲಕ್ಷಗಳನ್ನು ಮಾತ್ರ ಬಿಡುಗಡೆ ಮಾಡಲಾಗಿದ್ದು, ಬಾಕಿ ಉಳಿದಿರುವ ಅನುದಾನ ರೂ.1187.86 ಲಕ್ಷಗಳನ್ನು ಕೇಂದ್ರ ಸರ್ಕಾರವು ಅನುಮೋದಿಸಿರುವ ಫಲಾನುಭವಿ ಆಧಾರಿತ ಘಟಕ ಉಪ ಯೋಜನೆಗಳನ್ನು ಅನುಷ್ಠಾನ ಮಾಡಲು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-5 ಮೀಇಯೋ 2022, ಬೆಂಗಳೂರು ದಿನಾಂಕ: 10-02-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯನ್ನು ಅನುಷ್ಠಾನಗೊಳಿಸಲು ಪೂರಕ ಅಂದಾಜು-1 ರಲ್ಲಿ ಒದಗಿಸಲಾದ ರೂ.1187.86 ಲಕ್ಷ (ಒಂದು ಸಾವಿರದ ಒಂದುನೂರ ಎಂಬತ್ತೇಳು ಲಕ್ಷದ ಎಂಬತ್ತಾರು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡ ಲೆಕ್ಕ ಶೀರ್ಷಿಕೆಗಳ ಮುಂದೆ ನಮೂದಿಸಿರುವಂತೆ ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆ ಹೆಸರು | ಲೆಕ್ಕ ಶೀರ್ಷಿಕೆ | ಆಯವ್ಯಯ 2021-22 ರಲ್ಲಿ ಒದಗಿಸಲಾದ ಅನುದಾನ | 2021-22 ನೇ ಸಾಲಿನ ಪೂರಕ ಅಂದಾಜು-1 ರಲ್ಲಿ ಒದಗಿಸಿರುವ ಅನುದಾನ ಸೇರಿಸಿ ಬಿಡುಗಡೆ ಮಾಡಲಾದ ಅನುದಾನ |
|---|---|---|---|---|
| 1) | ಕೇ.ಪು.ಯೋ – ಕೇಂದ್ರದ ಪಾಲು ನೀಲಿಕ್ರಾಂತಿ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ | 2405–00–101–0–58 | | |
| | ಸಹಾಯಧನ | 106 | 2546.00 | 98.36 |
| | ಪರಿಶಿಷ್ಟ ಜಾತಿ ಉಪ ಯೋಜನೆ | 422 | 477.00 | 509.29 |
| | ಗಿರಿಜನ ಉಪ ಯೋಜನೆ | 423 | 160.00 | 200.43 |
| 2) | ಕೇ.ಪು.ಯೋ – ರಾಜ್ಯದ ಪಾಲು - ನೀಲಿಕ್ರಾಂತಿ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ | 2405–00–101–0–59 | | |
| | ಸಹಾಯಧನ | 106 | - | 65.51 |
| | ಪರಿಶಿಷ್ಟ ಜಾತಿ ಉಪ ಯೋಜನೆ | 422 | - | 180.52 |
| | ಗಿರಿಜನ ಉಪ ಯೋಜನೆ | 423 | - | 133.75 |
| | | | | 1187.86 |

Kamakshi U.A

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖಇ/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ: 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ-166/ಮೀಇಯೋ/2021, ದಿನಾಂಕ: 26-04-2021 ರನ್ವಯ ಮುಂದುವರೆಸಲಾದ ಯೋಜನೆಗಳನ್ನು ಅನುಮೋದಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ 2405-ಮೀನುಗಾರಿಕೆ ಅಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಸದರಿ ಯೋಜನೆಯಡಿ ಬಿಡುಗಡೆ ಮಾಡಲಾದ ಅನುದಾನವನ್ನು ಪೂರ್ಣವಾಗಿ ಪ್ರಸಕ್ತ ಸಾಲಿನಲ್ಲಿಯೆ ವೆಚ್ಚ ಮಾಡುವುದು, ವೆಚ್ಚ ಮಾಡಲು ಸಾಧ್ಯವಾಗದಿದ್ದಲ್ಲಿ, ಉಳಿದ ಅನುದಾನವನ್ನು ಸರ್ಕಾರಕ್ಕೆ ಅಧ್ಯರ್ಪಣೆ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ/1/ಟಿಎಫ್‌ಪಿ/2021, ದಿನಾಂಕ: 31-12-2021 ರಲ್ಲಿ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

Kamakshi U.A. 10/2/2022
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

10/02/2022

ಇವರಿಗೆ

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4. ಸಂಬಂಧಪಟ್ಟ ಜಂಟಿ ನಿರ್ದೇಶಕರುಗಳಿಗೆ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6. ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1) ವಿಧಾನಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.